ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ರಾಜ್ಯದಲ್ಲಿರುವ ರೇಷ್ಮೆ ಮಾರುಕಟ್ಟೆ ಹಾಗೂ ರೇಷ್ಮೆ ಬೆಳೆಗಳ ಕುರಿತು

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು):-

1073 (1289) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ರೇಷ್ಮೆ ಗೂಡಿನ ಮಾರುಕಟ್ಟೆಗಳಿವೆ ; ಇವುಗಳಲ್ಲಿ ಎಷ್ಟು ದೊಡ್ಡ ಮತ್ತು ಸಣ್ಣ ಮಾರುಕಟ್ಟೆಗಳು ಇವೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೇರೆ ದೇಶ/ರಾಜ್ಯಗಳಿಂದ ರೇಷ್ಮೆಯನ್ನು ಆಮದು ಮಾಡಿಕೊಳ್ಳಲಾಗುತ್ತಿದೆಯೇ ; ಇದ್ದಲ್ಲಿ, ಎಲ್ಲಿಂದ ಎಷ್ಟು ರೇಷ್ಮೆಯನ್ನು ವಾರ್ಷಿಕವಾಗಿ ಆಮದು ಮಾಡಿಕೊಳ್ಳಲಾಗುತ್ತಿದೆ ; (ಮಾಹಿತಿ ನೀಡುವುದು)

(ಇ) ರಾಜ್ಯದ ರೇಷ್ಮೆಯನ್ನು ಬೇರೆ ರಾಜ್ಯಗಳಿಗೆ/ದೇಶಗಳಿಗೆ ರಫ್ತು ಮಾಡಲಾಗುತ್ತಿದೆಯೇ ;ಇದ್ದಲ್ಲಿ, ವಾರ್ಷಿಕವಾಗಿ ಎಷ್ಟು ರೇಷ್ಮೆಯನ್ನು ರಫ್ತು ಮಾಡಲಾಗುತ್ತಿದೆ ; (ವಿವರ ನೀಡುವುದು)

(ಈ) ರೇಷ್ಮೆ ಮಾರುಕಟ್ಟೆ ಗುಣಮಟ್ಟವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಹಾಗೂ ರೈತರಿಗೆ ನೀಡಲಾಗುತ್ತಿರುವ ಯೋಜನೆಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)